ಯಾರು ಉದಾಸೀನತೆಯಿಂದ ಮೂರು ಜುಮುಅ (ಶುಕ್ರವಾರದ ನಮಾಝ್) ಗಳನ್ನು ಬಿಡುತ್ತಾರೋ, ಅಲ್ಲಾಹು ಅವರ ಹೃದಯದ ಮೇಲೆ ಮೊಹರು ಹಾಕುತ್ತಾನೆ

ಅಬುಲ್ ಜಅದ್ ಅದ್ದಮ್ರೀ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ (ಇವರು ಸಹಾಬಿವರ್ಯರಾಗಿದ್ದರು): ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಯಾರು ಉದಾಸೀನತೆಯಿಂದ ಮೂರು ಜುಮುಅ (ಶುಕ್ರವಾರದ ನಮಾಝ್) ಗಳನ್ನು ಬಿಡುತ್ತಾರೋ, ಅಲ್ಲಾಹು ಅವರ ಹೃದಯದ ಮೇಲೆ ಮೊಹರು ಹಾಕುತ್ತಾನೆ".
[صحيح] [رواه أبو داود والترمذي والنسائي وابن ماجه وأحمد]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಜುಮುಅ ನಮಾಝ್ ಬಿಡುವುದರ ಬಗ್ಗೆ ಮತ್ತು ಯಾರು ಉದಾಸೀನತೆ ಮತ್ತು ನಿರ್ಲಕ್ಷ್ಯದಿಂದ, ಯಾವುದೇ ಸಕಾರಣವಿಲ್ಲದೆ ಮೂರು ಬಾರಿ ಜುಮುಅ ನಮಾಝ್ ಅನ್ನು ಬಿಡುತ್ತಾರೋ, ಅಲ್ಲಾಹು ಅವರ ಹೃದಯಕ್ಕೆ ಒಳಿತು ತಲುಪದಂತೆ ತಡೆದು, ಅದರ ಮೇಲೆ ಮುದ್ರೆ ಒತ್ತುತ್ತಾನೆ ಮತ್ತು ಅದನ್ನು ಮುಚ್ಚಿಬಿಡುತ್ತಾನೆ ಎಂದು ಎಚ್ಚರಿಸಿದ್ದಾರೆ.

http://www.sunnah.global/hadeeth/kn/show/65768